**PRESS CLIPPING**

| News Paper | Edition | Date | Page | Reporter | Key Words |
|---|---|---|---|---|---|
| ಪ್ರಜಾವಾಣಿ | ಬೆಂಗಳೂರು | 20/06/15 | 02 | | |

# ತ್ಯಾಜ್ಯ ನೀರು ಸಂಸ್ಕರಣೆ ಅಗತ್ಯ

ಪ್ರಜಾವಾಣಿ ವಾರ್ತೆ

ಬೆಂಗಳೂರು: 'ಅಂತರ್ಜಲ ಸಂರಕ್ಷಣೆಯ ಬಗ್ಗೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಗಂಭೀರ ಚಿಂತನೆ ನಡೆಸುವ ಅಗತ್ಯವಿದೆ' ಎಂದು ಉನ್ನತ ಶಿಕ್ಷಣ ಸಚಿವ ಆರ್.ವಿ. ದೇಶಪಾಂಡೆ ಹೇಳಿದರು.

ಕರ್ನಾಟಕ ಜ್ಞಾನ ಆಯೋಗ, ಕರ್ನಾಟಕ ನಗರ ಮೂಲ ಸೌಲಭ್ಯ ಅಭಿವೃದ್ಧಿ ಹಾಗೂ ಹಣಕಾಸು ನಿಗಮ ಶುಕ್ರವಾರ ಆಯೋಜಿಸಿದ್ದ 'ತ್ಯಾಜ್ಯ ನೀರು ನಿರ್ವಹಣೆ ಹಾಗೂ ನೈರ್ಮಲ್ಯದ ಕಾರ್ಯತಂತ್ರ' ಕುರಿತ ವಿಚಾರ ಸಂಕಿರಣದಲ್ಲಿ ಅವರು ಮಾತನಾಡಿದರು. ತ್ಯಾಜ್ಯ ನೀರಿನ ಸಂಸ್ಕರಣೆ ಹಾಗೂ ಮರುಬಳಕೆ ಮಾಡಲು ಆದ್ಯತೆ ನೀಡಬೇಕು. ಇದಕ್ಕಾಗಿ ತಂತ್ರಜ್ಞಾನಗಳ ಮೊರೆ ಹೋಗಬೇಕು. ವಿದೇಶಗಳಲ್ಲಿ ತ್ಯಾಜ್ಯ ನೀರನ್ನು ಸಂಸ್ಕರಿಸಿ ಮರು ಬಳಕೆ ಮಾಡುತ್ತಿದ್ದಾರೆ ಎಂದರು.

ಗ್ರಾಮೀಣ ಭಾಗದ ಜನರು ನಗರ ಪ್ರದೇಶಗಳಿಗೆ ವಲಸೆ ಬರುತ್ತಿರುವುದರಿಂದ ನಗರಗಳಲ್ಲಿ ವಸತಿ, ವಿದ್ಯುತ್, ಕುಡಿಯುವ ನೀರು ಸೇರಿದಂತೆ ಮೂಲ ಸೌಲಭ್ಯಗಳ ಮೇಲೆ ಒತ್ತಡ ಹೆಚ್ಚಿದೆ. ಗ್ರಾಮೀಣ ಭಾಗದಲ್ಲಿ ಉದ್ಯೋಗಾವಕಾಶ ಕಲ್ಪಿಸುವುದರಿಂದ ಇದನ್ನು ಹತೋಟಿಗೆ ತರಬಹುದು ಎಂದರು. ನಗರಾಭಿವೃದ್ಧಿ ಇಲಾಖೆ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಡಿ. ಸತ್ಯಮೂರ್ತಿ ಮಾತನಾಡಿದರು.




'ತ್ಯಾಜ್ಯ ನೀರು ನಿರ್ವಹಣೆ ಹಾಗೂ ನೈರ್ಮಲ್ಯದ ಕಾರ್ಯತಂತ್ರ' ಕುರಿತ ವಿಚಾರ ಸಂಕಿರಣದಲ್ಲಿ ಅಂತರರಾಷ್ಟ್ರೀಯ ಆರ್ಥಿಕ ಸಂಬಂಧಗಳ ಸಂಶೋಧನಾ ಮಂಡಳಿಯ ಅಧ್ಯಕ್ಷೆ ಡಾ. ಐಶರ್ ಜಡ್ಜ್ ಅಹ್ಲುವಾಲಿಯ ಜೊತೆ ಸಚಿವ ಆರ್.ವಿ. ದೇಶಪಾಂಡೆ ಸಂವಾದ ನಡೆಸಿದರು. ಜ್ಞಾನ ಆಯೋಗದ ಅಧ್ಯಕ್ಷ ಡಾ. ಕೆ. ಕಸ್ತೂರಿ ರಂಗನ್ (ಮಧ್ಯದಲ್ಲಿರುವವರು) ಚಿತ್ರದಲ್ಲಿದ್ದಾರೆ.

Karnataka Jnana Aayoga

Room No.432- 433 and 438-439, 4th Floor, Vikasa Soudha, Bengaluru-560 001